**ಕರ್ನಾಟಕ ಸರ್ಕಾರ**

**ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ: DPI-CPI0RTE(ADMN)/1/2024-RTE/1637062 ದಿನಾಂಕ:21.05.2025

**:: ಪರಿಷ್ಕೃತ ಸುತ್ತೋಲೆ ::**

ವಿಷಯ:-2025-26 ನೇ ಸಾಲಿಗೆ ಶಿಕ್ಷಣ ಹಕ್ಕು ಕಾಯಿದೆ-2009 ರ ಸೆಕ್ಷನ್ 12(1)(ಬಿ) ಮತ್ತು ಸೆಕ್ಷನ್ 12(1) (ಸಿ)ಅಡಿ ಪ್ರವೇಶ ಪ್ರಕ್ರಿಯೆಯ ಬಗ್ಗೆ.

ಉಲ್ಲೇಖ:- 1. ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ 2009 ಕಾಯಿದೆ-2009.

2. ಕರ್ನಾಟಕ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ನಿಯಮಗಳು 2012
3. ಕರ್ನಾಟಕ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು (ತಿದ್ದುಪಡಿ) ನಿಯಮಗಳು 2018 ಇಡಿ 36 ಪಿಜಿಸಿ 2018 ದಿನಾಂಕ:30.01.2019
4. ಸರ್ಕಾರದ ಆದೇಶ ಸಂಖ್ಯೆ: ಇಡಿ 608 ಪಿಜಿಸಿ 2016 ದಿನಾಂಕ: 12.12.2016
5. ಸರ್ಕಾರದ ಆದೇಶ ಸಂಖ್ಯೆ: ಇಡಿ 204 ಪಿಜಿಸಿ 2017 ದಿ: 04.03.2017.ಮತ್ತು ದಿನಾಂಕ: 06.03.2017
6. ಸರ್ಕಾರದ ಆದೇಶ ಸಂ: ಇಡಿ: 36 ಪಿಜಿಜಿ 2018 ದಿ: 23.1.2018
7. ಸರ್ಕಾರದ ಆದೇಶ ಸಂಖ್ಯೆ: ಇಡಿ 101 ಪಿಜಿಸಿ 2019 ದಿನಾಂಕ:27.02.2019
8. ಸರ್ಕಾರದ ಆದೇಶ ಸಂಖ್ಯೆ:ಇಪಿ 100 ಪಿಜಿಸಿ 2024 ದಿನಾಂಕ:26.06.2024
9. ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:31.01.2025
10. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ:25.03.2025
11. ಸರ್ಕಾರದ ಆದೇಶ ಸಂಖ್ಯೆ:ಇಪಿ 260 ಪಿಜಿಸಿ 2022 ದಿನಾಂಕ: 16.05.2025

@@@@@

2025-26ನೇ ಸಾಲಿನ ಶಿಕ್ಷಣ ಹಕ್ಕು ಕಾಯಿದೆಯ ಸೆಕ್ಷನ್ 12(1)(ಬಿ) ಮತ್ತು 12(1)(ಸಿ) ಅಡಿ ಪ್ರವೇಶ ಪ್ರಕ್ರಿಯೆ ಸಂಬಂಧ ಉಲ್ಲೇಖ(10) ರನ್ವಯ ಮಾರ್ಗಸೂಚಿಗಳನ್ನೊಳಗೊಂಡಂತೆ ವೇಳಾಪಟ್ಟಿ ಸಹಿತ ಸುತ್ತೋಲೆ ಹೊರಡಿಸಲಾಗಿರುತ್ತದೆ.

ಸದರಿ ಸುತ್ತೋಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಇಪಿ 100 ಪಿಜಿಸಿ 2024 ದಿನಾಂಕ:26.06.2024 ರನ್ವಯ ಎಲ್.ಕೆ.ಜಿ ತರಗತಿಗೆ ಕನಿಷ್ಠ ವಯೋಮಿತಿ 04 ವರ್ಷ ಮತ್ತು ಗರಿಷ್ಠ ವಯೋಮಿತಿ 06 ವರ್ಷಗಳಾಗಿದ್ದು ಮತ್ತು 01ನೇ ತರಗತಿಗೆ ಕನಿಷ್ಠ 06 ವರ್ಷ ಮತ್ತು ಗರಿಷ್ಠ 08 ವರ್ಷವೆಂದು ಆದೇಶವಾಗಿರುವಂತೆ ಮಕ್ಕಳಿಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ತಿಳಿಸಲಾಗಿರುತ್ತದೆ.

ssr

## 2025-26ನೇ ಸಾಲಿನ ಆರ್.ಟಿ.ಇ ದಾಖಲಾತಿ ಪ್ರಕ್ರಿಯೆಗೆ ಮುಂದುವರೆದ ಪರಿಷ್ಕೃತ ವೇಳಾಪಟ್ಟಿ

| ಕ್ರ ಸಂ | ಚಟುವಟಿಕೆ | ದಿನಾಂಕ | ಕ್ರಮ |
|---|---|---|---|
| 1 | ಅನುದಾನಿತ ಶಾಲೆಗಳೂ ಸೇರಿದಂತೆ 1 ನೇ ತರಗತಿಗೆ 5 ವರ್ಷ 05 ತಿಂಗಳು ಪೂರ್ಣಗೊಳಿಸಿರುವ ಮಕ್ಕಳಿಗೆ ಆರ್.ಟಿ.ಇ. ಅಡಿ ದಾಖಲಾತಿ ಕೋರಿ ಪೋಷಕರು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಅವಧಿ | 22.05.2025 ರಿಂದ 28.05.2025 | ಪೋಷಕರು, ಶಾಲಾ ಮುಖ್ಯಸ್ಥರು, ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 2 | ಇ.ಐ.ಡಿ. ಮೂಲಕ ಸಲ್ಲಿಸಿದ ಅರ್ಜಿಗಳ ದತ್ತಾಂಶದ ನೈಜತೆ ಪರಿಶೀಲನೆ | 22.05.2025 ರಿಂದ 28.05.2025 | ಪೋಷಕರು, ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್. |
| 3 | ವಿಶೇಷ ಪ್ರವರ್ಗಗಳು ಮತ್ತು ಕ್ರಮಬದ್ಧವಲ್ಲದ ಅರ್ಜಿಗಳ ಪರಿಶೀಲನೆ | 22.05.2025 ರಿಂದ 28.05.2025 | ಪೋಷಕರು, ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್. |
| 4 | ಲಾಟರಿ ಪ್ರಕ್ರಿಯೆಗೆ ಅರ್ಹ ಅಭ್ಯರ್ಥಿಗಳ ಅಂತಿಮ ಪಟ್ಟಿ ಪ್ರಕಟಣೆ | 29.05.2025 | ಆಯುಕ್ತರ ಕಛೇರಿ ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು |
| 5 | ಆನ್ ಲೈನ್ ಲಾಟರಿ ಮೂಲಕ ಮೊದಲ ಸುತ್ತಿನ ಸೀಟು ಹಂಚಿಕೆ | 30.05.2025 | ಆಯುಕ್ತರ ಕಛೇರಿ ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು, ಎನ್.ಐ.ಸಿ ಹಾಗೂ ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್. |
| 6 | ಶಾಲೆಗಳಲ್ಲಿ ದಾಖಲಾತಿ ಪ್ರಾರಂಭ | 31.05.2025 ರಿಂದ 06.06.2025 | ಸಂಬಂಧಿಸಿದ ಪೋಷಕರು, ಶಾಲಾ ಮುಖ್ಯಸ್ಥರು, ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುಸ್ತುವಾರಿ |
| 7 | ಶಾಲೆಗಳಲ್ಲಿ ದಾಖಲಾದ ಮೊದಲ ಸುತ್ತಿನ ಮಕ್ಕಳ ವಿವರಗಳನ್ನು ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡುವುದು | 31.05.2025 ರಿಂದ 09.06.2025 | ಸಂಬಂಧಿಸಿದ ಶಾಲಾ ಮುಖ್ಯಸ್ಥರು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು |
| 8 | ಆನ್ ಲೈನ್ ಲಾಟರಿ ಮೂಲಕ ಎರಡನೇ ಸುತ್ತಿನ ಸೀಟು ಹಂಚಿಕೆ | 16.06.2025 | ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು, ಎನ್.ಐ.ಸಿ, ಇ-ಆಡಳಿತ ಹಾಗೂ ಸಾಫ್ಟ್‌ವೇರ್ ಡೆವಲಪ್‌ಮೆಂಟ್ ಸೆಂಟರ್ |
| 9 | ಎರಡನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟುಗಳಿಗೆ ಶಾಲೆಗಳಲ್ಲಿ ದಾಖಲಾತಿ ಅವಧಿ | 17.06.2025 ರಿಂದ 21.06.2025 | ಸಂಬಂಧಿಸಿದ ಪೋಷಕರು, ಶಾಲಾ ಮುಖ್ಯಸ್ಥರು, ಮತ್ತು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು |
| 10 | ಶಾಲೆಗಳಲ್ಲಿ ದಾಖಲಾದ ಎರಡನೇ ಸುತ್ತಿನ ಮಕ್ಕಳ ವಿವರಗಳನ್ನು ತಂತ್ರಾಂಶದಲ್ಲಿ ಅಳವಡಿಸುವುದು | 17.06.2025 ರಿಂದ 25.06.2025 | ಸಂಬಂಧಿಸಿದ ಶಾಲಾ ಮುಖ್ಯಸ್ಥರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು |

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಪ್ರಸ್ತುತ ಉಲ್ಲೇಖ(11)ರ ಸರ್ಕಾರದ ಆದೇಶದಲ್ಲಿ ಶೈಕ್ಷಣಿಕ ವರ್ಷದ ಜೂನ್ 01ನೇ ತಾರೀಖಿಗೆ 06 ವರ್ಷಗಳು ಪೂರ್ಣಗೊಂಡಿರುವ ಮಗುವನ್ನು 01ನೇ ತರಗತಿಗೆ ದಾಖಲಿಸಲು ವಯೋಮಿತಿಯನ್ನು 01 ಬಾರಿಯ ಕ್ರಮವಾಗಿ ಸಡಿಲಿಕೆ ನೀಡಿ ಪೂರ್ವ ಪ್ರಾಥಮಿಕ ಶಿಕ್ಷಣ ಪೂರ್ಣಗೊಳಿಸಿರುವ ಹಾಗೂ ಜೂನ್ 01ನೇ ತಾರೀಖಿಗೆ 05 ವರ್ಷ 05 ತಿಂಗಳು ಪೂರ್ಣಗೊಂಡಿರುವ ಮಕ್ಕಳನ್ನು 2025-26ನೇ ಶೈಕ್ಷಣಿಕ ವರ್ಷಕ್ಕೆ ಮಾತ್ರ 01ನೇ ತರಗತಿಗೆ ದಾಖಲು ಮಾಡಿಕೊಳ್ಳಲು ಆದೇಶಿಸಲಾಗಿದೆ. ಆದ್ದರಿಂದ ಸರ್ಕಾರದ ಆದೇಶದಂತೆ 2025 ರ ಜೂನ್ 01ನೇ ತಾರೀಖಿಗೆ 05 ವರ್ಷ 05 ತಿಂಗಳು ಪೂರ್ಣಗೊಂಡಿರುವ ಮಕ್ಕಳಿಗೂ ಸಹ 2025-26ನೇ ಸಾಲಿಗೆ ಆರ್.ಟಿ.ಇ. ಅಡಿ ಒಂದನೇ ತರಗತಿಗೆ ಪ್ರವೇಶಕ್ಕೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಅದರಂತೆ ಅರ್ಜಿ ಸಲ್ಲಿಸಲು 07 ದಿನಗಳ ಕಾಲಾವಕಾಶ ನೀಡಿ ಪರಿಷ್ಕೃತ ವೇಳಾಪಟ್ಟಿಯೊಂದಿಗೆ ಸುತ್ತೋಲೆಯನ್ನು ಹೊರಡಿಸಿದೆ. ಮುಂದುವರೆದು 2025-26ನೇ ಸಾಲಿನ ಆರ್.ಟಿ.ಇ ಅಡಿ ಪ್ರವೇಶ ಪ್ರಕ್ರಿಯೆಗೆ ಉಲ್ಲೇಖ(10)ರ ದಿನಾಂಕ : 25.03.2025 ರ ಸುತ್ತೋಲೆಯಲ್ಲಿನ ಮಾರ್ಗಸೂಚಿಯಲ್ಲಿನ ಅಂಶಗಳು ಯಥಾವತ್ತಾಗಿ ಮುಂದುವರೆಯುತ್ತವೆ.

**ವಿಶೇಷ ಸೂಚನೆ :**

ಉಪನಿರ್ದೇಶಕರು(ಆಡಳಿತ), ಕ್ಷೇತ್ರ ಶಿಕ್ಷಣಾಧಿಕಾರಿಗಳು, ಆರ್.ಟಿ.ಇ. ನೋಡಲ್ ಅಧಿಕಾರಿಗಳು 2025-26ನೇ ಸಾಲಿನ ಆರ್.ಟಿ.ಇ ಅಡಿ ಪ್ರವೇಶಕ್ಕೆ ಸಂಬಂಧಿಸಿದಂತೆ ದಿನಾಂಕ; 25/03/2025 ಮತ್ತು ಪರಿಷ್ಕೃತ ಸುತ್ತೋಲೆಯ ಮಾರ್ಗಸೂಚಿ ಅಂಶಗಳನ್ನು ಅನುಷ್ಠಾನಗೊಳಿಸುವುದು ಮತ್ತು ಪರಿಷ್ಕೃತ ವೇಳಾಪಟ್ಟಿಯಂತೆ ಸಲ್ಲಿಕೆಯಾಗುವ ಅರ್ಜಿಗಳನ್ನು ಆಯಾ ದಿನವೇ ಪರಿಶೀಲಿಸಿ ಇತ್ಯರ್ಥಪಡಿಸಲು ಕ್ರಮವಹಿಸುವುದು. ವ್ಯತ್ಯಯವಾದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೇ ನೇರ ಹೊಣೆಗಾರನ್ನಾಗಿ ಮಾಡಲಾಗುವುದು.

ssr

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ರವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ ಇವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಉಪನಿರ್ದೇಶಕರು(ಆಡಳಿತ) ಇವರ ಮುಖಾಂತರ ಸೂಕ್ತ ಕ್ರಮಕ್ಕಾಗಿ

ಪ್ರತಿಯನ್ನು:

1. ಅಪರ ಆಯುಕ್ತರು, ಧಾರವಾಡ ಮತ್ತು ಕಲಬುರಗಿ ಇವರಿಗೆ ಕಳುಹಿಸುತ್ತಾ, ತಮ್ಮ ವ್ಯಾಪ್ತಿಯಲ್ಲಿನ ಉಪನಿರ್ದೇಶಕರು(ಆಡಳಿತ) ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಈ ಬಗ್ಗೆ ಅಗತ್ಯ ತುರ್ತು ಕ್ರಮವಹಿಸಲು ಸೂಚಿಸುವಂತೆ ತಿಳಿಸಿದೆ.
2. ಕಛೇರಿ ಪ್ರತಿ.